AUGUST 13, 2025

**AKASHAVANI - DHARWAD**

**PRADESH SAMACHARA (KANNADA) 12 PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು,** ಹರ್ ಘರ್ ತಿರಂಗಾ ಯಾತ್ರೆಯ ಮೂಲಕ, ದೇಶಕ್ಕಾಗಿ ಪ್ರಾಣಾರ್ಪಣೆ ಮಾಡಿರುವ ಸ್ವಾತಂತ್ರ್ಯ ಯೋಧರನ್ನು ಸ್ಮರಿಸುವಂತೆ ಕರೆ ನೀಡಿದ್ದಾರೆ. ನಾಡಿನಾದ್ಯಂತ ಎಲ್ಲೆಡೆಯೂ ಹರ್ ಘರ್ ತಿರಂಗಾ ಅಭಿಯಾನವನ್ನು ಆಯೋಜಿಸುವ ಮೂಲಕ ದೇಶಪ್ರೇಮ, ರಾಷ್ಟ್ರಭಕ್ತಿಯನ್ನು ಜಾಗೃತಗೊಳಿಸುವಂತಾಗಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಹೇಳಿದರು. ಚಿಕ್ಕಬಳ್ಳಾಪುರ ಜಿಲ್ಲೆ ವಿಧುರಾಶ್ವತ್ಥದಲ್ಲಿ, ಆಯೋಜಿತ ಹರ್ ಘರ್ ತಿರಂಗಾ ಯಾತ್ರೆಗೆ ಸ್ವಾತಂತ್ರ್ಯ ಯೋಧರ ಸ್ಮಾರಕದಲ್ಲಿ, ಪುಷ್ಪನಮನ ಸಲ್ಲಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ದೇಶದ ಬಗ್ಗೆಗಿನ ಪ್ರೀತಿ, ಕಾಳಜಿ, ವಿಶ್ವಾಸವನ್ನು ಇಮ್ಮಡಿಗೊಳಿಸುವ ಉದ್ದೇಶದಿಂದ ಆಯೋಜಿಸಿರುವ ಅಭಿಯಾನದಲ್ಲಿ ಪಕ್ಷಬೇಧ ಮರೆತು ಎಲ್ಲರೂ ಪಾಲ್ಗೊಳ್ಳಬೇಕು ಎಂದರು.

<><><>

**ಕೊಪ್ಪಳ ಜಿಲ್ಲೆ ಕುಕನೂರು ತಾಲೂಕಿನ,** ಕುದುರಿಮೋತಿ ಗ್ರಾಮ ಪಂಚಾಯತ್ ತ್ಯಾಜ್ಯ ನಿರ್ವಹಣೆ ಹಾಗೂ ವಿಲೇವಾರಿಯಲ್ಲಿ ಗಮನಾರ್ಹ ಸಾಧನೆ ಮಾಡಿದೆ. ಆಗಸ್ಟ್ 15 ರಂದು, ಹೊಸದಿಲ್ಲಿಯ ಕೆಂಪುಕೋಟೆಯಲ್ಲಿ ಜರುಗುವ 79 ನೇ ಸ್ವಾತಂತ್ರ್ಯ ದಿನಾಚರಣೆಯಂದು, ವಿಶೇಷ ಆಹ್ವಾನಿತರಾಗಿ ಆಯ್ಕೆಯಾಗಿರುವ, ಕುದುರೆಮೋತಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ, ಪರಿದಾಬೇಗಂ ಹುಸೇನಸಾಬ್ ಅವರು ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಉತ್ತರ ಕರ್ನಾಟಕ ಸೇರಿದಂತೆ ರಾಜ್ಯದ ವಿವಿಧೆಡೆಗಳಲ್ಲಿ ತೀವ್ರ** ಮಳೆ ಹಿನ್ನೆಲೆ ಗ್ರಾಮೀಣ ರಸ್ತೆಗಳು ಹದಗೆಟ್ಟಿದ್ದು, ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲೂಕಿನ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ, 12 ಕೋಟಿ 27 ಲಕ್ಷ ರೂಪಾಯಿ ಅನುದಾನ ನೀಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ವಿಧಾನಸಭೆಯಲ್ಲಿ ಮಾತನಾಡಿದ ಅವರು, ಪ್ರಗತಿ ಪಥ ಯೋಜನೆಯ ಮೂಲಕ ಕಲ್ಯಾಣ ಕರ್ನಾಟಕ ಭಾಗದ ರಸ್ತೆಗಳು ಮೇಲ್ದರ್ಜೆಗೇರಲಿವೆ ಎಂದರು. ದಿಶಾಂಕ ಆಯಪ್ ಬಗ್ಗೆ ಉಲ್ಲೇಖಿಸಿದ ಸಚಿವರು, ರಾಜ್ಯದ ಗ್ರಾಮ ಪಂಚಾಯಿತಿಗಳಿಂದ ಒಟ್ಟು 12 ಸಾವಿರದ 300 ಕೋಟಿ ರೂಪಾಯಿ ತೆರಿಗೆ ಸಂಗ್ರಹವಾಗಿದ್ದು, ದೇಶದಲ್ಲೇ ಅತಿ ಹೆಚ್ಚು ಎಂದರು.

<><><>

**ಆಧಾರ್ ಮುಖ ದೃಢೀಕರಣ** ವ್ಯವಸ್ಥೆಯು ಪ್ರಮುಖ ಮೈಲಿಗಲ್ಲು ತಲುಪಿದ್ದು, 2025 ರ ಆಗಸ್ಟ್ 10 ರ ಹೊತ್ತಿಗೆ 200 ಕೋಟಿ ವಹಿವಾಟುಗಳನ್ನು ದಾಟಿದೆ ಎಂದು ಯುಐಡಿಎಐ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಭುವನೇಶ್ ಕುಮಾರ್ ತಿಳಿಸಿದ್ದಾರೆ. ಕೇವಲ ಆರು ತಿಂಗಳಲ್ಲಿ ವಹಿವಾಟುಗಳ ಸಂಖ್ಯೆ 100 ಕೋಟಿಯಿಂದ 200 ಕೋಟಿಗೆ ದ್ವಿಗುಣಗೊಂಡಿದೆ. ಕಡಿಮೆ ಸಮಯದಲ್ಲಿ 200 ಕೋಟಿ ಆಧಾರ್ ಫೇಸ್ ಅಥೆಂಟಿಕೇಶನ್ ವಹಿವಾಟುಗಳನ್ನು ತಲುಪಿರುವುದು, ಆಧಾರ್‌ನ ಸುರಕ್ಷಿತ ಮತ್ತು ನವೀನ ದೃಢೀಕರಣ ಪರಿಸರ ವ್ಯವಸ್ಥೆಯಲ್ಲಿನ ವಿಶ್ವಾಸವನ್ನು ಒತ್ತಿ ಹೇಳುತ್ತದೆ ಎಂದು ಹೇಳಿದ್ದಾರೆ.

<><><>

**ಆಕಾಶವಾಣಿ ಮೈಸೂರು 90 ವರ್ಷ ಪೂರೈಸಿದ** ಹಿನ್ನೆಲೆ, ನಾ ಕಸ್ತೂರಿ, ಹಾಸ್ಯ ರಸಿಕ ವೃಂದ ಹಾಗೂ ಆಕಾಶವಾಣಿ ಮೈಸೂರು ಜಂಟಿಯಾಗಿ, ನಾಳೆ ಬೆಳಗ್ಗೆ 9.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ, ಮೈಸೂರಿನ ಜೆ.ಎಸ್.ಎಸ್.ಮಹಿಳಾ ಕಾಲೇಜು ಆವರಣದ ನವಜ್ಯೋತಿ ಸಭಾಂಗಣದಲ್ಲಿ, 'ನಾ ಕಸ್ತೂರಿ ಸ್ಮರಣೋತ್ಸವ' ಕಾರ್ಯಕ್ರಮ ಆಯೋಜಿಸಿವೆ.

<><><>

**ವಿಶ್ವವಿಖ್ಯಾತ ನಾಡಹಬ್ಬ** ದಸರಾ ಮಹೋತ್ಸವ 2025 ರ ಹಿನ್ನಲೆ, ಮೈಸೂರಿಗೆ ಆಗಮಿಸಿರುವ ದಸರಾ ಗಜಪಡೆ ತಾಲೀಮು ಆರಂಭಿಸಿದೆ. ಕ್ಯಾಪ್ಟನ್ ಅಭಿಮನ್ಯು ನೇತೃತ್ವದ 9 ಆನೆಗಳೂ ತಾಲೀಮಿನಲ್ಲಿ ಭಾಗಿಯಾಗಿದ್ದವು.

<><><>

**ಮೈಸೂರು, ಶ್ರೀಕಂಠದತ್ತ ನರಸಿಂಹರಾಜ** ಒಡೆಯರ್ ಮೈದಾನದಲ್ಲಿ ಜರುಗಿದ ಮಹಾರಾಜ ಟ್ರೋಫಿ–2025 ಕ್ರಿಕೆಟ್ ಪಂದ್ಯಾವಳಿಯಲ್ಲಿ, ನಿನ್ನೆ ಹುಬ್ಬಳ್ಳಿ ಟೈಗರ್ಸ ತಂಡವು ಶಿವಮೊಗ್ಗ ಲಯನ್ಸ್ ತಂಡವನ್ನು 29 ರನ್ ಗಳಿಂದ ಮಣಿಸಿದೆ. ಹುಬ್ಬಳ್ಳಿ ತಂಡದ ಪರ ಮೊಹಮ್ಮದ್ ತಾಹಾ ಶತಕ ಗಳಿಸಿದರು. ಇನ್ನೊಂದು ಪಂದ್ಯದಲ್ಲಿ ಗುಲ್ಬರ್ಗ ಮಿಸ್ಟಿಕ್ಸ್ ತಂಡವು, ಮೈಸೂರು ವಾರಿಯರ್ಸ್ ತಂಡವನ್ನು ಎಂಟು ವಿಕೆಟ್ ಗಳಿಂದ ಮಣಿಸಿತು. ಇಂದು ಬೆಂಗಳೂರು ಬ್ಲಾಸ್ಟರ್ಸ್ ತಂಡವು, ಹುಬ್ಬಳ್ಳಿ ಟೈಗರ್ಸ್ ತಂಡವನ್ನು ಎದುರಿಸಲಿದೆ, ಪಂದ್ಯವು ಮಧ್ಯಾಹ್ನ 3:15 ಕ್ಕೆ ಆರಂಭವಾಗಲಿದೆ.

<><><>

**ಗದಗ ಜಿಲ್ಲೆ, ಗಜೇಂದ್ರಗಡ ತಾಲೂಕಿನಾದ್ಯಂತ** ನಿರಂತರ ಸುರಿಯುತ್ತಿರುವ ಮಳೆ ಹಿನ್ನೆಲೆ, ಹಾನಿಗೊಳಗಾದ ತಾಲೂಕಿನ ವಿವಿಧ ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿದ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಪರಿಶೀಲಿಸಿದರು.

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>